ತಿಲಕೂರು : ಜನಮೂಲಕ್ಕಾಗಿ ಕೊರೆದ ಬಾವಿಯಲ್ಲಿ ಸಾಕಷ್ಟು ನೀರು ದೊರಕಿದೆ. ಏರು ಕೊಳವೆ ಮಾರ್ಗ ಕೆಲಸ ಮುಗಿದಿದೆ.

3) ಜಲಮೂಲಕ್ಕಾಗಿ ಬಾವಿಯು ಸಿಗದೆ ಇದ್ದ ಕಾರಣ ಮತ್ತು ವಿದ್ಯುತ್ ಸರಬರಾಜಿನ ಅಭಾವದಿಂದ ಕೆಲಸಗಳು ವಿಳಂಬವಾಗಿದೆ.

4) ಆದಷ್ಟು ಬೇಗನೆ ನೀರನ್ನು ಸರಬರಾಜು ಮಾಡಲಾಗುವುದು.

ಕಬಿನಿ 2ನೇ ಹಂತದ ಕಾರ್ಯವನ್ನು ತ್ವರಿತಗೊಳಿಸುವುದು.

2435 ಶ್ರೀ ವಾಟಾಳ್ ನಾಗರಾಜ್ : ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಕಬಿನಿ 2ನೇ ಹಂತದ ಯೋಜನೆಯನ್ನು ಎಂದಿನಿಂದ ಪ್ರಾರಂಭಿಸಲಾಯಿತು.

ಆ) ಈ ಯೋಜನೆಯ ವಿವರಗಳೇನು ಯೋಜನೆ ಪೂರ್ಣಗೊಂಡಾಗ ಎಷ್ಟು ಎಕರೆ ಭೂಮಿಗೆ ನೀರಾವರಿ ಸೌಲಭ್ಯ ದೊರೆಯಲಿದೆ;

ಇ) ಈ ಯೋಜನೆಗೆ ಪ್ರಸಕ್ತ ವರ್ಷ ಬಿಡುಗಡೆ ಮಾಡಲಾದ ಹಣ ಎಷ್ಟು;

ಈ) ಈ ಯೋಜನೆಯನ್ನು ತ್ವರಿತಗೊಳಿಸಲು ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು ?

ಶ್ರೀ ಕೆ.ಹೆಚ್ ಪಾಟೀಲ್(ಭಾರಿ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು)

ಅ) ಕಬಿನಿ ಯೋಜನೆಯ 2ನೇ ಹಂತವನ್ನು ಇನ್ನೂ ಪ್ರಾರಂಭಿಸಿಲ್ಲ

ಆ) ವಿವರಗಳನ್ನು ಲಗತ್ತಿಸಿರುವ ಅನುಬಂಧದಲ್ಲಿ ನೀಡಲಾಗಿದೆ.

ಇ) ಪ್ರಸ್ತುತ ವರ್ಷದಲ್ಲಿ ಈ ಯೋಜನೆ ಅನುಧಾನವನ್ನು ನೀಡಿಲ್ಲ.

ಈ) ಈ ಯೋಜನೆಯನ್ನು ಹಣದ ಲಭ್ಯತ್ಯೆಯನ್ನು ಅವಲಂಬಿಸಿ ಆದಷ್ಟು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು.

ಅನುಬಂಧ

ವಿಧಾನ ಸಭಾ ಸದಸ್ಯರಾದ ಶ್ರೀ ವಾಟಾಳ್ ನಾಗರಾಜ್ ಅವರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2435ಕ್ಕೆ ಪ್ರಶ್ನೆ (ಅ)ಗೆ ಉತ್ತರಗಳು

•••••

ಈ ಕೆಳಗೆ ವಿವರಿಸಿರುವ ಕಾಮಗಾರಿಗಳ ಕಬಿನಿ ಸಮಗ್ರ ಯೋಜನೆಯ ಅಂಗಳಾಗಿರುತ್ತವೆ.

ಅ) ಮೈಸೂರು ಜಿಲ್ಲೆಯ ಹೆಗ್ಗಡದೇವನಕೋಟೆ ತಾಲ್ಲೂಕಿನ ಬಿದರ ಹಳ್ಳಿ ಬಳಿ ಕಬಿನಿ ನದಿಗೆ ಅಡ್ಡಲಾಗಿ ಜಲಾಶಯವನ್ನು ನಿರ್ಮಿಸಿದ್ದು ಈ ಜಲಾಶಯದಿಂದ ಎಡದಂಡೆ ಮತ್ತು ಬಲದಂಡೆ ನಾಲೆಗಳ ಮೂಲಕ 45.730 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸುವುದು.

ಆ) ಹೆಗ್ಗಡದೇವನಕೋಟೆ ತಾಲ್ಲೂಕಿನಲ್ಲಿ ಬಂಡಿಗಾಡು ಹೊಳೆಗೆ ಅಡ್ಡಲಾಗಿ ಒಂದು ಜಲಾಶಯವನ್ನು ನಿರ್ಮಿಸಿ ಇದರ ಮೂಲಕ ಎಡದಂಡೆ ಮತ್ತು ಬಲದಂಡೆಗಳಲ್ಲಿ 1.700 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸುವುದು.

ಇ) ಹೆಗ್ಗಡದೇವನಕೋಟೆ ತಾಲ್ಲೂಕಿನಲ್ಲಿ ಈಗಾಗಲೇ ನಿರ್ಮಿಸಿರುವ ನುಗು ಜಲಾಶಯದ ಮೇಲ್ದಂಡೆಯಲ್ಲಿ ಒಂದು ಜಲಾಶಯವನ್ನು ನಿರ್ಮಿಸಿ ಬಲದಂಡೆಯಲ್ಲಿ 40.470 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವುದು.

2. ಕಬಿನಿ ಸಮಗ್ರ ಯೋಜನೆ ಅಂದಾಜು ವೆಚ್ಚ 471 ಕೋಟಿ ರೂಪಾಯಿಗಳು ಒಟ್ಟು 87.900 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರಕುವುದು.

3. ಪ್ಯಾರಾ 1 (ಅ)ದಲ್ಲಿ ಸೂಚಿಸಿರುವ ಕಬಿನಿ ಯೋಜನೆಯನ್ನು ಈ ಸಮಗ್ರ ಯೋಜನೆಯ ಮೊದಲಿನ ಹಂತವಾಗಿ ಕೈಗೊಳ್ಳಲಾಗಿದ್ದು ಜಲಾಶಯ ಎಡದಂಡೆ ನಾಲೆ ಮತ್ತು ಬಲದಂಡೆ ನಾಲೆಯ ಬಹುಪಾಲು ಕೆಲಸಗಳು ಮುಗಿದಿದ್ದು 1-4-91ರವರೆಗೆ 40,895 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸಾಮರ್ಥ್ಯವನ್ನು ಕಲ್ಪಿಸಲಾಗಿದೆ ಮತ್ತು 157.44 ಕೋಟಿ ರೂಪಾಯಿಗಳ ವೆಚ್ಚ ಮಾಡಲಾಗಿದೆ. ಉಳಿಕೆ ಕೆಲಸ ಪ್ರಗದಿಯಲ್ಲಿವೆ.

4. ಪ್ಯಾರಾ 1 (ಅ) ಮತ್ತಿ (ಇ)ರಲ್ಲಿ ಸೂಚಿಸಿರುವ ಕಾಮಗಾರಿಗಳನ್ನು ಇನ್ನೂ ಕೈಗೆತ್ತಿಕೊಳ್ಳಬೇಕಾಗಿದೆ.

ಗ್ರಾಮೀಣ ಪ್ರದೇಶಗಳ ಪ್ರಮುಖ ರಸ್ತೆಗಳ ಪಟ್ಟಿ

2458 - ಶ್ರೀ ಎಲ್.ಆರ್. ಶಿವರಾಮೇಗೌಡ : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಗ್ರಾಮೀಣ ಪ್ರದೇಶಗಳ ಪ್ರಮುಖ ರಸ್ತೆಗಳನ್ನು ಜಿಲ್ಲಾ ಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆಗೆ ವಹಿಸುವ ವಿಚಾರ ಸರ್ಕಾರದ ಮುಂದಿದೆಯೇ?

ಆ) ಜಿಲ್ಲಾ ಪರಿಷತ್‌ನಲ್ಲಿ ಹಣ ಅಭಾವವಿರುವುದರಿಂದ ರಸ್ತೆಗಳ ದುರಸ್ತಿ ಕಾರ್ಯ ಸರಿಯಾಗಿ ಆಗದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಗೆ ವಹಿಸುವ ಕುರಿತು ಸರ್ಕಾರದ ನಿರ್ದಿಷ್ಟ ನಿಲುವೇನು?

ಶ್ರೀ ಜಿ.ಹೆಚ್. ಅಶ್ವತ್ಥ ರೆಡ್ಡಿ (ಲೋಕೋಪಯೋಗಿ ಸಚಿವರು)

ಅ) ಇದೆ

ಆ) ಬಂದಿದೆ

ಇ) ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಿಂದ ಸುಮಾರು 6000 ಕಿ.ಮಿ. ರಸ್ತೆಯನ್ನು ಮೇಲ್ದರ್ಜೆಗೆ ಏರಿಸಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ತೆಗೆದುಕೊಳ್ಳುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ದಕ್ಷಿಣ ಕನ್ನಡದ ಸರಪಾಡಿ ಅಣೆಕಟ್ಟು

2456 - ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ದಕ್ಷಿಣ ಕನ್ನಡ ಸರಪಾಡಿ ಯೋಜನೆ ಈಗ ಯಾವ ಹಂತದಲ್ಲಿದೆ;

ಆ) ಈ ಅಣೆಕಟ್ಟು ನಿರ್ಮಾಣದಿಂದ ಸೌಲಭ್ಯ ಪಡೆಯುವ ಗ್ರಾಮಗಳ ಮತ್ತು ಒಟ್ಟು ಜನರ ಸಂಖ್ಯೆ ಎಷ್ಟು;

ಇ) ಈ ಅಣೆಕಟ್ಟು ನಿರ್ಮಾಣದಿಂದ ಮುಳುಗಡೆ ಯಾಗುವ ದೇವಾಲಯ ಗುಡಿ ಹಾಗೂ ಮಸೀದಿಗಳ ಸಂಖ್ಯೆ ಎಷ್ಟು;